# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 84

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 09.12.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಭಾರತ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆರವರ ಪತ್ರ ದಿನಾಂಕ:22.10.2024ರಲ್ಲಿ ಎಲ್ಲಾ ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಪತ್ರದಲ್ಲಿ "ಟಿಡಿಪಿಎಸ್ ನಿಯಂತ್ರಣ ಆದೇಶ 2015ರ ವಿಭಾಗ 10 (2) ಮತ್ತು ಷರತ್ತು 3ರನ್ವಯ ಅನರ್ಹ ಪಡಿತರ ಚೀಟಿ ಹೊಂದಿದ ಕುಟುಂಬಗಳನ್ನು ಬಿಪಿಎಲ್ ಪಟ್ಟಿಯಿಂದ ತೆಗೆದುಹಾಕಲು ಮತ್ತು ಕಾಲಕಾಲಕ್ಕೆ ಈ ಪಟ್ಟಿಯನ್ನು ನವೀಕರಿಸುವ ಕುರಿತು ಕ್ರಮ ಕೈಗೊಳ್ಳುವುದು" ಎಂದು ನಿರ್ದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ರಾಜ್ಯ ಸರ್ಕಾರ ಈ ಕುರಿತು ಕೈಗೊಂಡಿರುವ ಕ್ರಮಗಳೇನು; ಹಾಗೂ ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ರವರ ಗಣಕೀಕರಣ ಮತ್ತು eKYC ದೇಶದಲ್ಲಿ 5.8 ಕೋಟಿ ಪಡಿತರ ಚೀಟಿಗಳನ್ನು ಹಿಂಪಡೆದಿದ್ದು, ಅದರಲ್ಲಿ ರಾಜ್ಯದ ಎಷ್ಟು ಪಡಿತರ ಚೀಟಿಗಳನ್ನು ಹಿಂಪಡೆಯಲಾಗಿದೆ; | ಸರ್ಕಾರದ ಮಾನದಂಡಗಳನ್ವಯ ಕುಟುಂಬ ತಂತ್ರಾಂಶದಿಂದ ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ಆದಾಯ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 6 ತಿಂಗಳಿನಿಂದ ನಿರಂತರವಾಗಿ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆಯಲಾಗಿರುತ್ತದೆ. ಇದರಲ್ಲಿ ಆದಾಯ ತೆರಿಗೆ ಪಾವತಿದಾರರು ಹಾಗೂ ಸರ್ಕಾರಿ ನೌಕರರ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗಿರುತ್ತದೆ. |

| | | |
|---|---|---|
| | | ರಾಜ್ಯದಲ್ಲಿ ಇ-ಕೆವೈಸಿ ಮಾಡದ 16,066 ಪಡಿತರ ಫಲಾನುಭವಿಗಳನ್ನು ರದ್ದು ಪಡಿಸಲಾಗಿರುತ್ತದೆ. |
| ಇ | ಈ ಆದೇಶ ಬಂದ ನಂತರ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್‌ಗಳನ್ನು ಪಡೆಯಲು ಅಥವಾ ಅರ್ಹರಾಗಲು ಮಾನದಂಡಗಳಲ್ಲಿ ತಿದ್ದುಪಡಿ ತರಲಾಗಿದೆಯೇ; ಅಥವಾ ಹೊಸ ಮಾನದಂಡಗಳನ್ನು ರೂಪಿಸಲಾಗಿದೆಯೇ; | ಆದ್ಯತಾ ಪಡಿತರ ಚೀಟಿ ಪಡೆಯಲು ಸರ್ಕಾರ ನಿಗಧಿ ಪಡಿಸಿರುವ ಮಾನದಂಡಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. |
| ಈ | ರಾಜ್ಯದಲ್ಲಿ ಜುಲೈ 2019 ರಿಂದ ಮೇ 2023ರ ಅವಧಿಯಲ್ಲಿ ಬಡತನ ರೇಖೆಗಿಂತ ಮೇಲಿರುವ ಕುಟುಂಬಗಳ ಬಿಪಿಎಲ್ ಕಾರ್ಡ್‌ಗಳನ್ನು ಪಡೆಯುವುದಲ್ಲದೇ ಬಿಪಿಎಲ್ ಕಾರ್ಡ್‌ದಾರರಿಗೆ ಇರುವ ಸೌಲಭ್ಯಗಳನ್ನು ಪಡೆದು ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಳ್ಳಲಾಗಿದೆ? | ರಾಜ್ಯಾದ್ಯಂತ ಜನವರಿ-2021 ರಿಂದ ಮೇ-2023ರ ಅವಧಿಯಲ್ಲಿ 3,35,463 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ರೂ. 13,51,30,858/-ಗಳನ್ನು ದಂಡವನ್ನು ವಿಧಿಸಲಾಗಿರುತ್ತದೆ. |

ಆನಾಸ 344 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು